(13)

# ಕರ್ನಾಟಕ ವಿಧಾನ ಪರಿಷತ್

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ :2239
2. ಸದಸ್ಯರ ಹೆಸರು :ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸುವ ದಿನಾಂಕ : 26.3.2021
4. ಉತ್ತರಿಸುವವರು :ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | 2010 ರಿಂದ 2020 ರವರೆಗೆ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಸಹಾಯಕ ನಿರ್ದೇಶಕ, ಕಾರ್ಯನಿರ್ವಾಹಕ, ಉಪಕಾರ್ಯದರ್ಶಿ ಹುದ್ದೆಗಳಲ್ಲಿದ್ದ ಎಷ್ಟು ಜನರಿಗೆ ಕ.ನಾ.ಸೇ(ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 19(3)(c) ಪ್ರಕಾರ ಬಡ್ತಿ ನೀಡಿ ಆದೇಶ ಹೊರಡಿಸಲಾಗಿದೆ; (ಸದರಿ ಕಡತದ ಟಿಪ್ಪಣಿ ಪ್ರತಿ ಹಾಗೂ ಆದೇಶದ ಪ್ರತಿಗಳನ್ನು ಒದಗಿಸುವುದು) | ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ನಿಯಮ 19 (3) (ಸಿ)ಈ ನಿಯಮವು ಮುಂಬಡ್ತಿ ಪಡೆದು ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ನೌಕರರ ಸ್ಥಾನವನ್ನ ಅವಧಿಯ ಘೋಷಣೆಗೆ ಸಂಬಂಧಿಸಿದ್ದಾಗಿದ್ದು, ಈ ನಿಯಮದಡಿ ಯಾವುದೇ ಬಡ್ತಿಯನ್ನು ನೀಡಿರುವುದಿಲ್ಲ. |
| (ಆ) | ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ದಿನಾಂಕ:18-11-2013 ರ ರಾಜ್ಯ ಕರಡು ಜೇಷ್ಠತಾ ಪಟ್ಟಿಯಲ್ಲಿ, ಕೆ.ಸಿ.ಎಸ್.ನಿಯಮ 32 ರಡಿಯಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿ ಹೆಚ್ಚುವರಿ ಪ್ರಭಾರ ಪಡೆದು ಪೂರ್ವಾನ್ವಯ ದಿನಾಂಕದಿಂದಲೇ ಮುಂಬಡ್ತಿ ನೀಡಿರುವುದು ಕಾನೂನು ಬಾಹಿರ ಎಂದು ಪಿ.ಡಿ.ಓ.ಗಳು ಆಕ್ಷೇಪಣೆ ವ್ಯಕ್ತಪಡಿಸಿರುವುದು ನಿಜವೇ; ಹೌದಾದಲ್ಲಿ, ಈ ಕುರಿತು ಸಂಬಂಧಪಟ್ಟ ಜಿಲ್ಲಾ ಪಂಚಾಯಿತಿಗಳಿಗೆ ಇಲಾಖೆಯು ಪತ್ರ ಬರೆದಿದೆಯೇ; ಹಾಗಿದ್ದಲ್ಲಿ, ಪತ್ರದ ಪ್ರತಿಗಳನ್ನು ಒದಗಿಸುವುದು; | ಲಭ್ಯವಿರುವ ಮಾಹಿತಿಯಂತೆ ಇಂತಹ ಪ್ರಕರಣಗಳು ಸದ್ಯಕ್ಕೆ ಕಂಡು ಬಂದಿರುವುದಿಲ್ಲ. |

| | | |
|---|---|---|
| (ಇ) | ಈ ಕುರಿತು ಸಂಬಂಧಪಟ್ಟ ಜಿಲ್ಲಾ ಪಂಚಾಯತಿಗಳಿಂದ ಪಡೆದ ದಾಖಲೆಗಳ ಪ್ರತಿಗಳನ್ನು ಇಲಾಖೆಯು ಸ್ವೀಕರಿಸಿದೆಯೇ; ಹೌದಾದಲ್ಲಿ, ಸದರಿ ದಾಖಲೆಗಳನ್ನು ಪರಿಶೀಲಿಸಿ ಕೈಗೊಂಡ ಕ್ರಮಗಳೇನು; | ಅನ್ವಯಿಸುವುದಿಲ್ಲ |
| (ಈ) | ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತಿಯಲ್ಲಿ ದಿನಾಂಕ:09-03-2010ರಿಂದ ಪೂರ್ವಾನ್ವಯ ವಾಗುವಂತೆ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಬಡ್ತಿ ನೀಡಿರುವುದು ನಿಜವೇ; ಹೌದಾದಲ್ಲಿ, ಸದರಿ ಬಡ್ತಿ ನೀಡಿರುವುದು ಕಾನೂನು ಬಾಹಿರವಾಗುವುದಲ್ಲವೇ; ಸದರಿ ಕಾನೂನು ಬಾಹಿರ ಬಡ್ತಿ ಪ್ರಕ್ರಿಯೆಗೆ ಕಾರಣಕರ್ತರಾದ ಅಧಿಕಾರಿಗಳು ಯಾರು ಯಾರು; ಇವರ ವಿರುದ್ಧ ಕೈಗೊಂಡ ಕ್ರಮಗಳೇನು; (ಹೆಸರು, ಪದನಾಮಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು) | ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್ ವತಿಯಿಂದ ಯಾವುದೇ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಮೇಲಿನ/ಮುಂದಿನ ಹುದ್ದೆಗೆ ಬಡ್ತಿ ನೀಡಿರುವುದು ಕಂಡು ಬರುವುದಿಲ್ಲ. |
| ಉ | ಕಾನೂನು ಬಾಹಿರವಾಗಿ ಬಡ್ತಿ ಪಡೆದವರು ಪ್ರಸ್ತುತ ಯಾವ ಹುದ್ದೆಯಲ್ಲಿ ಕೆಲಸ ನಿರ್ವಹಿಸುತ್ತಿದ್ದಾರೆ ಹಾಗೂ ಸದರಿಯವರಿಗೆ ಹಿಂಬಡ್ತಿ ನೀಡಲಾಗಿದೆಯೇ; ಹಿಂಬಡ್ತಿ ನೀಡದಿದ್ದಲ್ಲಿ ಅದಕ್ಕೆ ಕಾರಣವೇನು? (ವಿವರ ಒದಗಿಸುವುದು) | ಅನ್ವಯಿಸುವುದಿಲ್ಲ |

ಗ್ರಾಅಪ 69 ಕೆ.ಎಸ್.ಎಸ್. 21(ಇ)

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು